THE HINDU

Tuesday, June 18, 2024

Books invited

The Hindu Bureau
BENGALURU

University of Agricultural Sciences, Bengaluru, has invited books for Kannada Krishi Pustaka Prashasti 2023 from writers who have written on agriculture in Kannada. They can send 3 copies of their books to UAS, GKVK campus, by July 15. Visit http://uasbangalore.edu.in or call 080-23330153 for more details.

18-06-2024
The Hindu Pg. 04

ಹೊಸ ದಿಗಂತ 8 18 Jun 2024

ಆಲೆಮನೆಗಳಿಂದ ಮೈಷುಗರ್‌ಗೆ ಪೈಪೋಟಿ

ಬರದ ಹಿನ್ನೆಲೆಯಲ್ಲಿ ಕಬ್ಬಿನ ಬೆಳೆಗೆ ಕೊರತೆ: ಸಕ್ಕರೆಯಷ್ಟೇ ಬೆಲ್ಲಕ್ಕೂ ಭರ್ಜರಿ ಬೆಲೆ

• ಶ್ರೀನಿವಾಸ್ ಕೆ. ಬೆಳ್ಳೂರು

ದಿಗಂತ ವಿಶೇಷ

ಮಂಡ್ಯ: ಕಳೆದ ವರ್ಷ ಬರಗಾಲ ಮತ್ತು ನೀರಿನ ಕೊರತೆಯಿಂದ ಪ್ರಸಕ್ತ ಸಾಲಿನಲ್ಲಿ ಕಾರ್ಖಾನೆಗಳಿಗೆ ಕಬ್ಬಿಗೆ ತೀವ್ರ ಕೊರತೆ ಕಾಡಲಿದೆ. ಪ್ರತಿ ಕಾರ್ಖಾನೆಗಳಿಗೂ ತಲಾ ಎರಡರಿಂದ ಮೂರು ಲಕ್ಷ ಟನ್ ಸಿಗುವುದೇ ಹೆಚ್ಚು ಎನ್ನಲಾಗುತ್ತಿದೆ. ಬೆಲ್ಲಕ್ಕೆ ಉತ್ತಮ ಬೆಲೆ ಇರುವುದರಿಂದ ಆಲೆಮನೆಗಳೂ ಕೂಡ ಕಾರ್ಖಾನೆಗಳೊಂದಿಗೆ ಕಬ್ಬು ನುರಿಸುವುದಕ್ಕೆ ಪೈಪೋಟಿಗಿಳಿದಿವೆ. ಮಳೆ ಕೊರತೆಯಿಂದ ಕೃಷ್ಣ ರಾಜಸಾಗರ ಜಲಾಶಯ ಕಳೆದ ವರ್ಷ ಭರ್ತಿಯಾಗಲಿಲ್ಲ. ಬೇಸಿಗೆ ಸಮಯದಲ್ಲಿ ನಾಲೆ ಆಧುನೀಕರಣದ ನೆಪವೊಡ್ಡಿ ನೀರು ಹರಿಸಲಿಲ್ಲ, ರಣಬಿಸಿಲ ತಾಪಕ್ಕೆ ಕಬ್ಬಿನ ಬೆಳೆ ಉರುವಲಾಯಿತು. ಕಬ್ಬು ಒಣಗುತ್ತಿರುವುದನ್ನು ನೋಡಲಾಗದೆ ಹಲವರು 8 ತಿಂಗಳ ಕಬ್ಬನ್ನು ಹೊರ ಜಿಲ್ಲೆಯ ಕಾರ್ಖಾನೆಗೆ ಸಾಗಿಸಿದರು. ಹೀಗಾಗಿ ಕಬ್ಬಿಗೆ ತೀವ್ರ ಕೊರತೆ ಎದುರಾಗಿದೆ.

ಸಾಗಣೆ ವೆಚ್ಚ ಕೈಬಿಟ್ಟ ಖಾಸಗಿ ಕಾರ್ಖಾನೆಗಳು: ಪ್ರತಿ ವರ್ಷ ಕನಿಷ್ಠ 4 ಲಕ್ಷ ಟನ್‌ನಿಂದ 5 ಲಕ್ಷ ಟನ್ ಕಬ್ಬು ಅರೆಯುತ್ತಿದ್ದ ಕಾರ್ಖಾನೆಗಳು ಈ ವರ್ಷ ಎರಡೂವರೆಯಿಂದ ಮೂರು ಲಕ್ಷ ಟನ್ ಕಬ್ಬು ಅರೆದರೆ ಅದೇ ಹೆಚ್ಚು ಎನ್ನುವಂತಾಗಿದೆ. ಅಲ್ಲದೆ, ನಿತ್ಯ 4 ರಿಂದ 5 ಸಾವಿರ ಟನ್ ಕಬ್ಬು ಅರೆಯುತ್ತಿದ್ದ ಕಾರ್ಖಾನೆಗಳಿಗೆ ಈ ಬಾರಿ ಆ ಪ್ರಮಾಣದ ಕಬ್ಬು ಸಿಗದೇಹೋಗಬಹುದು.

ಕಬ್ಬಿಗೆ ತೀವ್ರ ಕೊರತೆ ಇರುವುದರಿಂದ ಕೆಲವೊಂದು ಖಾಸಗಿ ಕಾರ್ಖಾನೆಗಳ ರೈತರಿಂದ ಸಾಗಣೆ ವೆಚ್ಚ ಪಡೆಯುವುದನ್ನೇ ನಿಲ್ಲಿಸಿವೆ. ಪ್ರತಿ 5 ರಿಂದ 10 ಕಿ.ಮೀ.ಗೆ ಒಂದೊಂದು ರೀತಿಯ ದರ ನಿಗದಿಪಡಿಸಿಕೊಂಡು ರೈತರಿಗೆ ಕೊಡಬೇಕಾದ ಹಣದಲ್ಲಿ ಕಟಾವು ಮಾಡಿಕೊಳ್ಳುತ್ತಿದ್ದ ಕಾರ್ಖಾನೆಗಳು, ಈಗ ಕಬ್ಬು ಸಿಗುವುದೇ ಕಷ್ಟವಾಗಿರುವುದರಿಂದ ಸಾಗಣೆ ವೆಚ್ಚವನ್ನು ಕೇಳದೆ ತಮ್ಮದೇ ಖರ್ಚಿನಲ್ಲೇ ಕಾರ್ಖಾನೆಗೆ ಕೊಂಡೊಯ್ಯುವುದಕ್ಕೆ ನಿರ್ಧರಿಸಿವೆ. ಈಗಾಗಲೇ ಮೈಷುಗರ್ ವ್ಯಾಪ್ತಿಯ ಹಲವು ರೈತರನ್ನೂ ಸಂಪರ್ಕಿಸಿ ಮುಂಗಡ ಹಣ ಕೊಟ್ಟು ಕಬ್ಬು ಒಪ್ಪಿಗೆ ಮಾಡಿಕೊಂಡಿದ್ದಾರೆ ಎಂದು ತಿಳಿದುಬಂದಿದೆ.

ಮೈಷುಗರ್ ಸಕ್ಕರೆ ಕಾರ್ಖಾನೆ ಸುಮಾರು 2 ಲಕ್ಷ ಟನ್ ಕಬ್ಬು ಒಪ್ಪಿಗೆ ಮಾಡಿಕೊಂಡಿರುವುದಾಗಿ ಹೇಳುತ್ತಿದೆ. ಆದರೆ, ಕಬ್ಬು ಸಾಗಣೆ ವೆಚ್ಚ ಕೈಬಿಡುವ ಬಗ್ಗೆ ಆಡಳಿತ ಮಂಡಳಿ ಇದುವರೆಗೂ ಯಾವುದೇ ತೀರ್ಮಾನ ಕೈಗೊಂಡಿಲ್ಲ. ಕಬ್ಬು ಸಾಗಣೆ ವೆಚ್ಚ ಕೈಬಿಡದಿದ್ದರೆ ಕಾರ್ಖಾನೆಗೆ ಬರಬೇಕಾದ ಕಬ್ಬು ಬೇರೆ ಕಾರ್ಖಾನೆಗಳಿಗೆ ಅಥವಾ ಆಲೆಮನೆಗಳ ಪಾಲಾಗುವ ಸಾಧ್ಯತೆಗಳೂ ಇವೆ.

ಬೆಲ್ಲಕ್ಕೂ ಉತ್ತಮ ಬೆಲೆ

ಪ್ರಸ್ತುತ ದಿನಗಳಲ್ಲಿ ಬೆಲ್ಲಕ್ಕೂ ಉತ್ತಮ ಬೆಲೆ ಇದೆ. ಪ್ರತಿ ಟನ್ ಬೆಲ್ಲಕ್ಕೆ 4000 ರೂ.ನಿಂದ 4500 ರೂ.ವರೆಗೆ ಬೆಲೆ ಇರುವುದರಿಂದ ಆಲೆಮನೆಗಳ ಮಾಲೀಕರು ರೈತರಿಂದ ಕಬ್ಬನ್ನು ಪಡೆದು ನುರಿಸುತ್ತಿದ್ದಾರೆ. ಜಿಲ್ಲೆಯಲ್ಲಿರುವ ಆಲೆಮನೆಗಳು ನಿತ್ಯ ಗರಿಷ್ಠ 2 ಸಾವಿರ ಟನ್ ಕಬ್ಬು ಅರೆಯುತ್ತಿವೆ. ಆಲೆಮನೆ ಮಾಲೀಕರು ರೈತರಿಗೆ ಸ್ಥಳದಲ್ಲೇ 2500 ರೂ.ನಿಂದ 2800 ರೂ. ಹಣ ಕೊಟ್ಟು ಕಬ್ಬನ್ನು ಕಡಿದುಕೊಂಡು ಆಲೆಮನೆಗಳಿಗೆ ತರುತ್ತಿದ್ದಾರೆ. ಇದರಿಂದ ರೈತರಿಗೆ ಸಾಕಷ್ಟು ಅನುಕೂಲವಾಗುತ್ತಿದೆ. ಕಾರ್ಖಾನೆಗಳಿಗೆ ಕಬ್ಬನ್ನು ಸಾಗಿಸಿದರೂ ತೂಕದಲ್ಲಿ ವ್ಯತ್ಯಾಸ, ಹಣ ಬರುವವರೆಗೂ ಕಾಯಬೇಕು. ಸಾಗಣೆ ವೆಚ್ಚ ಕೈಬಿಟ್ಟರೂ ಕಟಾವು, ಗದ್ದೆಯಿಂದ ರಸ್ತೆವರೆಗೆ ಸಾಗಿಸುವುದಕ್ಕೆ ಹಣ ನೀಡಬೇಕಿರುವುದರಿಂದ ಕನಿಷ್ಠ 600 ರೂ,.ನಿಂದ 800 ರೂ,.ವರೆಗೆ ನಷ್ಟವಾಗಲಿದೆ. ಆ ಕಾರಣಕ್ಕೆ ಆಲೆಮನೆಯವರಿಗೆ ನೀಡುವುದೇ ಉತ್ತಮ ಎಂಬ ಅಭಿಪ್ರಾಯವೂ ರೈತರಲ್ಲಿದೆ. ಕಾರ್ಖಾನೆಗಳು ಶುರುವಾಗುವುದಕ್ಕೆ ಮುನ್ನವೇ ಸಿಕ್ಕಷ್ಟು ಕಬ್ಬನ್ನು ಅರೆಯುವ ಕಾರ್ಯದಲ್ಲಿ ಆಲೆಮನೆಗಳು ತೊಡಗಿವೆ. ಕಂಪನಿಗಳು ಕಬ್ಬು ಅರೆಯುವಿಕೆ ಆರಂಭಿಸಿದರೆ ಕಬ್ಬು ಸಿಗುವುದಿಲ್ಲ ಎಂಬ ಕಾರಣಕ್ಕೆ ಬಿರುಸಿನಿಂದ ಅರೆಯಲಾರಂಭಿಸಿವೆ.

"ಬರ ಮತ್ತು ನೀರಿನ ಕೊರತೆಯಿಂದ ಜಿಲ್ಲೆಯಲ್ಲಿ ಕಬ್ಬಿನ ಪ್ರಮಾಣ ಕಡಿಮೆ ಇದೆ. ಕಾರ್ಖಾನೆಗಳು ನಿರೀಕ್ಷಿಸಿದಷ್ಟು ಕಬ್ಬು ಈ ಬಾರಿ ಸಿಗುವುದಿಲ್ಲ. ಬೆಲ್ಲಕ್ಕೆ ಉತ್ತಮ ಬೆಲೆ ಇರುವುದರಿಂದ ಆಲೆಮನೆಗಳೂ ಕಬ್ಬನ್ನು ಅರೆಯುತ್ತಿವೆ. ಸ್ಥಳದಲ್ಲೇ ರೈತರಿಗೆ 2800 ರು.ವರೆಗೆ ಹಣ ಕೊಟ್ಟು ಕಬ್ಬನ್ನು ತರಲಾಗುತ್ತಿದೆ. ಹಾಗಾಗಿ ಆಲೆಮನೆಗಳ ಕಡೆಗೆ ಕಬ್ಬು ಸಾಗಿಸಲು ರೈತರು ಒಲವನ್ನು ಹೊಂದಿದ್ದಾರೆ.

■ ಹಾಡ್ಯ ರಮೇಶ್‌ರಾಜು, ಪ್ರಾಂತ ಪ್ರಧಾನ ಕಾರ್ಯದರ್ಶಿ, ಭಾರತೀಯ ಕಿಸಾನ್ ಸಂಘ

"ಕಾರ್ಖಾನೆಗಳು ಆರಂಭವಾಗದಿರುವುದರಿಂದ ಆಲೆಮನೆಗಳಿಗೆ ಕಬ್ಬು ರವಾನೆಯಾಗುತ್ತಿದೆ. ಕಾರ್ಖಾನೆಗಳು ಶುರುವಾದರೆ ರೈತರು ಕಬ್ಬನ್ನು ಇಲ್ಲಿಗೇ ತರುತ್ತಾರೆ. ಎಲ್ಲಾ ಕಬ್ಬನ್ನು ಆಲೆಮನೆಯವರಿಂದಲೇ ಅರೆಯಲು ಸಾಧ್ಯವಿಲ್ಲ. ಪ್ರತಿ ವರ್ಷ ಅರೆಯುವಷ್ಟು ಕಬ್ಬು ಕಾರ್ಖಾನೆಗಳಿಗೆ ಸಿಗುವುದಿಲ್ಲ. ರೈತರಿಂದ ಹೆಚ್ಚು ಕಬ್ಬನ್ನು ಪಡೆಯುವುದಕ್ಕಾಗಿ ಖಾಸಗಿ ಕಾರ್ಖಾನೆಗಳು ಸಾಗಣೆ ವೆಚ್ಚ ಕೈಬಿಟ್ಟಿವೆ.

■ ಸಾತನೂರು ವೇಣುಗೋಪಾಲ್, ಅಧ್ಯಕ್ಷರು, ಕಬ್ಬು ಬೆಳೆಗಾರರ ಒಕ್ಕೂಟ

"ಮೈಷುಗರ್ ಕಾರ್ಖಾನೆಯಲ್ಲಿ ಕಬ್ಬು ಸಾಗಣೆ ವೆಚ್ಚ ಕೈಬಿಡುವುದಕ್ಕೆ ಆಡಳಿತ ಮಂಡಳಿ ಸಭೆಯಲ್ಲಿ ತೀರ್ಮಾನವಾಗಬೇಕು. ಜಿಲ್ಲೆಯಲ್ಲಿ ಕಬ್ಬಿನ ಬೆಳೆ ಕಡಿಮೆ ಪ್ರಮಾಣದಲ್ಲಿದೆ. ಖಾಸಗಿ ಕಾರ್ಖಾನೆಗಳು ಸಾಗಣೆ ವೆಚ್ಚ ಕೈಬಿಟ್ಟಿರುವುದರಿಂದ ಮೈಷುಗರ್‌ನಲ್ಲೂ ಅದನ್ನು ಕೈಬಿಡಬೇಕಾಗುತ್ತದೆ. ಕಾರ್ಖಾನೆ ಒಪ್ಪಿಗೆ ಮಾಡಿಕೊಂಡಿರುವ 2 ಲಕ್ಷ ಟನ್ ಕಬ್ಬು ನುರಿಸಲು ಆಡಳಿತ ಮಂಡಳಿ ತ್ವರಿತವಾಗಿ ಕಾರ್ಯೋನ್ಮುಖವಾಗಬೇಕು.

■ ಎಸ್.ಕೃಷ್ಣ, ಅಧ್ಯಕ್ಷರು, ಮೈಷುಗರ್ ಕಬ್ಬು ಒಪ್ಪಿಗೆದಾರರ ಸಂಘ

18-06-2024
Hosa Digantha Pg.8

ಆಹಾರವೇ ವೈದ್ಯ

ಬೆಂ. ಮು. ಮಾರುತಿ

ರೋಗಗಳಿಗೆ ರಾಮಬಾಣ ಸಿರಿಧಾನ್ಯ

ಜನ ಜೀವನಶೈಲಿ ಬದಲಾಗುತ್ತಿದ್ದಂತೆ ಸಾಂಪ್ರದಾಯಿಕ ಹಾಗೂ ಆರೋಗ್ಯಕರ ಅಡುಗೆ ತಿನ್ನಿಸುಗಳು ಮರೆತೇ ಹೋಗಿವೆ. ಇನ್ನು ಸಿರಿಧಾನ್ಯಗಳ ಬಳಕೆಯಂತೂ ತೀರ ಕಡಿಮೆಯಾಗಿದೆ ಆದರೆ ಸಿರಿಧಾನ್ಯಗಳ ಪ್ರಯೋಜನ ಗೊತ್ತಾದರೆ ನೀವು ಪ್ರತಿನಿತ್ಯವು ಸಿರಿಧಾನ್ಯ ಬಳಸೋದನ್ನ ಮಿಸ್ ಮಾಡುವುದೇ ಇಲ್ಲ, ನಮ್ಮ ರಾಜ್ಯದಲ್ಲಿ ರಾಗಿ, ಸಜ್ಜೆ, ನವಣೆ, ಬರಗು ಸಾಮೆ, ಊದಲು, ಆರ್ಕ, ಕೊರಲೆ ಇತರ ಸಿರಿಧಾನ್ಯಗಳನ್ನ ಕಾಣಬಹುದು. ಆದರೆ ಇವುಗಳಲ್ಲಿ ನಾವು ಹೆಚ್ಚಾಗಿ ಬಳಸೋದು ರಾಗಿ ಮತ್ತು ಜೋಳ ಮಾತ್ರ, ಇನ್ನುಳಿದ ಧಾನ್ಯಗಳನ್ನ ಉಪಯೋಗಿಸುವುದು ತೀರಾ ಕಡಿಮೆ ಎನ್ನಬಹುದು. ಹಿಂದಿನ ಕಾಲದಲ್ಲಿ ನಮ್ಮ ಹಿರೀಕರು ಹೆಚ್ಚಾಗಿ ತಿನ್ನುತ್ತಿದ್ದ ಊಟವೆಲ್ಲಾ ಸಿರಿಧಾನ್ಯಗಳಿಂದ ಕೂಡಿದ್ದವು. ಹಾಗಾಗಿ

ನಮ್ಮ ಹಿರಿಯರು ಯಾವುದೇ ಖಾಯಿಲೆಗಳಿಲ್ಲದೆ ದೀರ್ಘಾಯುಷಿಗಳಾಗಿದ್ದರು.

ಸಿರಿಧಾನ್ಯ ನಮ್ಮ ದೇಹಕ್ಕೆ ಅಗತ್ಯವಾಗಿ ಬೇಕಾಗಿರುವ ಪೌಷ್ಟಿಕ ಸತ್ವಗಳಾದ ತಾಮ್ರ, ಮೆಗ್ನೀಷಿಯಂ, ಪಾಸ್ಪರಸ್, ಮ್ಯಾಂಗನೀಸ್ ಮತ್ತು ಇತರ ಪೌಷ್ಟಿಕ ಸತ್ವಗಳು ಸಾಕಷ್ಟು ಲಭ್ಯವಿದೆ. ಅಸಮತೋಲನವಾದ ಆಹಾರದ ಪದ್ಧತಿಯಲ್ಲಿ ಸಿರಿಧಾನ್ಯಗಳು ನಿಮಗೆ ಆರೋಗ್ಯಕರವಾದ ಜೀವನವನ್ನು ಒದಗಿಸಲು ಸಹಾಯ ಮಾಡುತ್ತದೆ ಹಾಗು ಕ್ಯಾಲೋರಿಗಳ ಬಗ್ಗೆ ಹೆಚ್ಚು ಗಮನ ಹೊಂದಿರುವ ಜನರಿಗೆ ಹೇಳಿ ಮಾಡಿಸಿದ ಆಹಾರ ಎಂದರೆ ಅದು ಸಿರಿಧಾನ್ಯ ಎಂದು ಹೇಳಬಹುದು.

ಇತ್ತೀಚಿಗೆ ಬದಲಾದ ಜೀವನ ಶೈಲಿಯಿಂದ ಮನುಷ್ಯರಿಗೆ ಕಾಡುತ್ತಿರುವ ಹೃದಯದ ಸಮಸ್ಯೆಗಳು, ಪಾರ್ಶ್ವವಾಯು, ರಕ್ತದೊತ್ತಡ , ಮಧುಮೇಹ ಹೀಗೆ ದೀರ್ಘ ಕಾಲ ಕಾಡುವ ಕಾಯಿಲೆಗಳಿಂದ ಜನರು ನಿಶಕ್ತರಾಗಿದ್ದಾರೆ. ಹಾಗಾಗಿ ಈ ಸಂದರ್ಭದಲ್ಲಿ ಪೌಷ್ಟಿಕಾಂಶಗಳನ್ನು ಒಳಗೊಂಡಿರುವ ಸಿರಿಧಾನ್ಯದ ಅವಶ್ಯಕತೆ ಜನರಿಗಿದೆ. ಇದರಲ್ಲಿ ಕಡಿಮೆ ಕ್ಯಾಲೋರಿಗಳಿರುವುದರಿಂದ ಆರೋಗ್ಯಕ್ಕೆ ಯಾವುದೇ ಹಾನಿ ಉಂಟಾಗದೇ ದೇಹದ ತೂಕವನ್ನು ಕಡಿಮೆ ಮಾಡಿಕೊಳ್ಳಲು ಸಹಾಯ ಮಾಡುತ್ತದೆ. ದೇಹದಲ್ಲಿ ವಿಪರೀತ ಬೊಜ್ಜು ಮತ್ತು ಕೊಬ್ಬಿನ ಅಂಶ ಜೊತೆಗೆ ಕೊಲೆಸ್ಟ್ರಾಲ್ ಅಂಶ ತುಂಬಿಕೊಳ್ಳುವುದನ್ನು ತಪ್ಪಿಸುತ್ತದೆ.

ರಾಸಾಯನಿಕಯುಕ್ತ ಆಹಾರ ಮತ್ತು ಜಂಕ್‌ಫುಡ್ ಸೇವನೆಯಿಂದ ಮಧುಮೇಹ, ಕ್ಯಾನ್ಸರ್, ಸ್ಥೂಲಕಾಯ, ಹೃದಯಸಂಬಂಧಿ ಕಾಯಿಲೆಗಳು ಸೇರಿದಂತೆ ಹಲವಾರು ಸಮಸ್ಯೆಗಳು ವಯಸ್ಸಿನ ಬೇಧವಿಲ್ಲದೆ ಎಲ್ಲರನ್ನೂ ಕಾಡುತ್ತಿದೆ. ಇಂತಹ ಸಂದರ್ಭದಲ್ಲಿ ಆರೋಗ್ಯ ಸುಧಾರಣೆಯಾಗಬೇಕಾದರೆ ಸಿರಿಧಾನ್ಯ ಬಳಸಬೇಕು.

18-06-2024
Vishwa Vani Pg. 11

ಸೊಪ್ಪು, ಬೀನ್ಸ್, ಆಲೂಗಡ್ಡೆ ಬೆಲೆಯೂ ಏರಿಕೆ | ಗ್ರಾಹಕ ಜೇಬಿಗೆ ಕತ್ತರಿ

ಪೂರೈಕೆ ಕುಸಿತ: ತರಕಾರಿ ಬೆಲೆ ಮತ್ತೆ ಗಗನಕ್ಕೆ

ಹೂವಪ್ಪ ಐ ಹೆಚ್. ಬೆಂಗಳೂರು

ಮಾರುಕಟ್ಟೆಯಲ್ಲಿ ಹಸಿರು ತರಕಾರಿ, ಸೊಪ್ಪು, ಬೀನ್ಸ್ ಬಳಿಕ ಇದೀಗ ಟೊಮೇಟೊ ಬೆಲೆ ದಿಢೀರ್ ಏರಿಕೆಯಾಗಿದೆ.

ಎಪಿಎಂಸಿ ಸಗಟು ಕೆಜಿಗೆ 50-60 ನಂತೆ ಮಾರಾಟವಾಗಿದೆ. ಕೋಲಾರ ನಾಸಿಕ್ ನಿಂದ ಬರುತ್ತಿದ್ದ ಟೊಮೇಟೊ ಕೋಲಾರ ಮಾರುಕಟ್ಟೆಗೆ ಬರುತ್ತಿಲ್ಲ ಸ್ಥಳೀಯ ಟೊಮೇಟೊ ಮಾರುಕಟ್ಟೆ ಗೆ ಅಂದಾಜು 120-140 ಸಾವಿರ ಬರುತ್ತಿದ್ದ ಬಾಕ್ಸ್ ಈಗ 70, 80 ಸಾವಿರ ಬಾಕ್ಸ್ ಮಾತ್ರ ಬರುತ್ತಿದೆ. ಮಳೆ ಹಾಗೂ ರೋಗಬಾಧೆ ಕಾರಣದಿಂದ ಮಾರುಕಟ್ಟೆಗೆ ಪೂರೈಕೆ ಗಣನೀಯವಾಗಿ ಕುಸಿದಿರುವುದು ಬೆಲೆ ಏರಿಕೆಗೆ ಪ್ರಮುಖ ಕಾರಣವಾಗಿದೆ. ಮುಂದಿನ ದಿನಗಳಲ್ಲಿ ಶೀಘ್ರ ದರ 100-120 ಆದರೂ ಅಚ್ಚರಿ ಪಡಬೇಕಾಗಿಲ್ಲ ಎಂದು ವರ್ತಕರು ಹೇಳುತ್ತಾರೆ.

ಕಳೆದ ಎರಡು ವಾರಗಳ ಹಿಂದೆ ಬೆಂಗಳೂರಿನ ಚಿಲ್ಲರೆ ಮಾರುಕಟ್ಟೆಗಳಲ್ಲಿ ಟೊಮೇಟೊ ಬೆಲೆ ಕೆಜಿಗೆ 40-45 ರೂವರೆಗೆ ಇತ್ತು. ಆದರೆ ಈಗ ಉತ್ತಮ 70-80 ಕ್ಕೆ ಏರಿಕೆಯಾಗಿದೆ. ಮಧ್ಯಮ ಹಾಗೂ ಅತೀ ಮಾಧ್ಯಮ ದರ್ಜೆಯ ಟೊಮೆಟೋ ಕ್ರಮವಾಗಿ 50- 60 ಕ್ಕೆ ಮಾರಟವಾಗುತ್ತಿದೆ. ದಿನಬಳಕೆಯ ಟೊಮೇಟೊ ಬೆಲೆಯೇರಿಕೆ ಗ್ರಾಹಕರನ್ನು ಚಿಂತೆಗೀಡು ಮಾಡಿದೆ.

ಮಂಡ್ಯ, ಮೈಸೂರು, ಮದ್ದೂರು, ಕನಕಪುರ ಪ್ರದೇಶಗಳಿಂದ ಬೆಂಗಳೂರಿಗೆ ಬರುತ್ತಿದ್ದ ಟೊಮೇಟೊ ಪ್ರಮಾಣ ಬಹುತೇಕ ಇಳಿಕೆಯಾಗಿದೆ. ಚಿಕ್ಕಮಗಳೂರು, ಕಡೂರು ಕಡೆಯಿಂದ ಕಳೆದ ಎರಡು ವರ್ಷದಿಂದಲೂ ಟೊಮೇಟೊ ಸರಿಯಾಗಿ ಬರುತ್ತಿಲ್ಲ. ಇನ್ನು ಕೋಲಾರ, ಚಿಕ್ಕಬಳ್ಳಾಪುರ, ಚಿಂತಾಮಣಿ, ಗೌರಿಬಿದನೂರು, ಮಳೆ, ರೋಗಬಾಧೆ ಕಾಟದಿಂದ ಪೂರೈಕೆ ಮುಕ್ಕಾಲು ಭಾಗದಷ್ಟು ಕಡಿಮೆಯಾಗಿದೆ ಎನ್ನುತ್ತಾರೆ ವ್ಯಾಪಾರಿಗಳು.

ಬಡವರಿಗೆ ಕಷ್ಟ

ತರಕಾರಿಗಳನ್ನ ಖರೀದಿ ಮಾಡುವುದಾದರು ಹೇಗೆ ಹೇಳಿ. ಮನೆಗಳಲ್ಲಿ ಸಮಾರಂಭಗಳನ್ನು ಮಾಡುವುದಾದರು ಹೇಗೆ. ತರಕಾರಿಯಿಂದ ಹಿಡಿದು ದಿನಸಿವರೆಗೂ ಎಲ್ಲಾ ಬೆಲೆಯು ತುಂಬ ಜಾಸ್ತಿಯಾಗಿ ಹೋಗಿದೆ. ಹೀಗೆ ಮುಂದುವರೆದರೆ ಬಡಜನರ ಪರಿಸ್ಥಿತಿ ತುಂಬ ಕಷ್ಟವಾಗಲಿದೆ ಎಂದು ಗ್ರಾಹಕ ಶೋಭರಾಣಿ ಹೇಳುತ್ತಾರೆ.

ಸದ್ಯ ಬೆಂಗಳೂರು ಮಾರುಕಟ್ಟೆಗೆ ಟೊಮೇಟೊಗೆ ಮಹಾರಾಷ್ಟ್ರದಿಂದ ಬರುತಿದ್ದ ಟೊಮೋಟೊ ಆವಕ ಬಾರಿ ಕಡಿಮೆಯಾಗಿದೆ. ಇದೀಗ ಕಳೆದ ನಾಲ್ಕು ದಿನಗಳಿಂದ ಅಲ್ಲೂ ಮಳೆಯಾಗುತ್ತಿದ್ದು, ಸಾಗಾಟ ಕಷ್ಟವಾಗಿದೆ. ಅಲ್ಲಿಯೂ ಕೆಜಿಗೆ 45 ದಾಟಿದೆ. ಸಗಟು ಮಾರುಕಟ್ಟೆ ಕಲಾಸಿಪಾಳ್ಯದಲ್ಲಿ 22ಕೆಜಿ ಟೊಮೇಟೊ ಕ್ರೇಟ್‌ಗೆ 1300-1500 ಗೆ ತಲುಪಿದೆ. ಅಂದರೆ ಹೋಲ್‌ಸೆಲ್ ದರವೇ ಕೆಜಿಗೆ 70 ತಲುಪಿದೆ.

ಇನ್ನು ತರಕಾರಿ ಬೆಲೆ ತುಂಬ ಜಾಸ್ತಿಯಾಗಿದೆ. ತರಕಾರಿ ಯಾವುದು ಸರಿಯಾಗಿ ಬರುತ್ತಿಲ್ಲ. ಹೊಸ ಬೆಳೆ ಬರುವವರೆಗೂ ಬೆಲೆ ಹೀಗೆ ಮುಂದುವರೆಯಲಿದೆ. ಆದರೆ ತರಕಾರಿಗಳ ಬೆಲೆ ಕೇಳಿ ಗ್ರಾಹಕರು ತರಕಾರಿಗಳನ್ನು ಖರೀದಿ ಮಾಡಲು ಹಿಂದುಮುಂದು ನೋಡುತ್ತಿದ್ದಾರೆ. ಒಂದು ಕೆಜಿ ಖರೀದಿಸುವವರು ಅರ್ಧ ಕೆಜಿ ಖರೀದಿ ಮಾಡುತ್ತಿದ್ದಾರೆ. ಇದರಿಂದ ವ್ಯಾಪಾರ ತುಂಬ ಕಡಿಮೆ ಆಗುತ್ತಿದೆ.

– ಮುರುಳಿ, ತರಕಾರಿ ವ್ಯಾಪಾರಿ

ಒಂದು ವಾರದಿಂದ ಮಳೆಯು ಬರುತ್ತಿದ್ದು, ಬಂದಂತಹ ಬೆಳೆಯು ಹಾಳಾಗುತ್ತಿದೆ. ಹೀಗಾಗಿ ಬರುವ ಅಲ್ಪ ತರಕಾರಿಗಳಿಗೆ ಹೆಚ್ಚಿನ ಬೇಡಿಕೆಯಾಗಿದೆ. ಇನ್ನು ಹೊಸ ಬೆಳೆ ಬರುವವರೆಗೂ ಬೆಲೆ ಇದೇ ರೀತಿ ಹೆಚ್ಚಾಗುವ ಸಾಧ್ಯತೆ ಇದ್ದು, ಮುಂದಿನ ದಿನಗಳಲ್ಲಿ ಮಳೆಯ ಅವಾಂತರ ಹೀಗೆ ಮುಂದುವರೆದರೆ ತರಕಾರಿಗಳ ಬೆಲೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ.

– ಮಂಜುನಾಥ್, ಎಪಿಎಂಸಿ ತರಕಾರಿ ವ್ಯಾಪಾರಿ

ಮುಂದಿನ ವಾರವೇ ಕೆಜಿ ದರ 120 ಆಗುವ ಸಾಧ್ಯತೆಯಿದೆ ಎಂದು ಟೊಮೋಟೊ ವ್ಯಾಪಾರಿಗಳು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ನಾನಾ ಭಾಗಗಳಿಂದ ಬರುತ್ತಿದ್ದ ಒಟ್ಟಿನಲ್ಲಿ ಟೊಮೇಟೊ ರಫ್ತು ಕಡಿಮೆ ಆಗಿದ್ದ ಪರಿಣಾಮ ಟೊಮೇಟೊ ದರ ಏರಿಕೆಗೆ ಮುಖ್ಯ ಕಾರಣವಾಗಿದೆ. ಬೆಂಗಳೂರು ಮಾತ್ರವಲ್ಲದೇ ಉತ್ತರಕರ್ನಾಟಕ, ದಕ್ಷಿಣ ಕರ್ನಾಟಕ ಹಾಗೂ ಮೈಸೂರು, ಶಿವಮೊಗ್ಗ ಸೇರಿದಂತೆ ಹಲವು ಕಡೆಗಳಲ್ಲಿ ಟೊಮೇಟೊ ಬೆಲೆಯಲ್ಲಿ ಏರಿಕೆಯಾಗಿದೆ.

ಆಲೂಗಡ್ಡೆ ಬೆಲೆ ಏರಿಕೆ: ಅತೀಹೆಚ್ಚು ಆಲೂ ಬೆಳೆಯುವ ರಾಜ್ಯವಾದ ಉತ್ತರಪ್ರದೇಶದಲ್ಲಿ ಪಶ್ಚಿಮ ಬಂಗಾಳ ಕಳೆದ ವರ್ಷಕ್ಕೆ ಹೋಲಿಸಿದರೆ ಶೇ.40 ರಷ್ಟು ಬೆಳೆ ಕಡಿಮೆಯಾಗಿದೆ. ಬೇಡಿಕೆತಕ್ಕಷ್ಟು ಪೂರೈಕೆ ಇಲ್ಲದೆ ಹಿನ್ನೆಲೆಯಲ್ಲಿ ಆಲೂಗಡ್ಡೆಯ ಬೆಲೆ ಗಣನೀಯವಾಗಿ ಹೆಚ್ಚಳವಾಗಿದೆ. ಕಳೆದ ಸಾಲಿನಲ್ಲಿ ಎಪಿಎಂಸಿ ಆಲೂಗಡ್ಡೆ ಸಗಟು ದರ ಕೆಜಿಗೆ ಉತ್ತಮ ದಪ್ಪ 18-22 ಇದ್ದ ಬೆಳೆ ಈ ವರ್ಷ 32-38 ರು. ಮಧ್ಯಮ ಗಾತ್ರ 12-14 ರು. ಇದ್ದ ಬೆಲೆ 26-28 ರು. ಗೆ ಮಾರಾಟವಾಗಿದೆ. ಚಿಲ್ಲರೆ ದರದಲ್ಲಿ ಗುಣಮಟ್ಟ ಅನುಸಾರ 35-55 ರು. ಗೆ ಮಾರಾಟವಾಗುತ್ತಿದೆ.

ಈ ವಾರವೂ ತರಕಾರಿಗಳ ಬೆಲೆ ಏರಿಕೆ: ಮೆಣಸಿನಕಾಯಿ, ಬೀನ್ಸ್ ದರ ಗಗನಕ್ಕೇರಿದೆ. ಬರಗಾಲದಿಂದ ಸಾಕಷ್ಟು ಅವಾಂತರಗಳಾಗಿವೆ. ನೀರಿಲ್ಲದೆ ತರಕಾರಿ ಬೆಳೆ ಬಾಡಿಹೋಗಿದ್ದರೆ ಇದೀಗ ಮಳೆಯಿಂದ ತರಕಾರಿಗಳ ಬೆಳೆ ನಾಶವಾಗುತ್ತಿದೆ. ದರ ಏರುತ್ತಲೇ ಇದೆ. ಕಳೆದ ವಾರಕ್ಕೆ ಹೋಲಿಕೆ ಮಾಡಿದರೆ ಈ ವಾರ ತರಕಾರಿ ಬೆಲೆ ಕೆಜಿಗೆ 20-30 ರು. ದುಬಾರಿಯಾಗಿದೆ. ಬೀನ್ಸ್ 170-180 ರು. ಬಟಾಣಿಕಾಯಿ 240-250 ರು. ಕ್ಯಾಪ್ಸಿಕಮ್ 90-95 ರು. ಕ್ಯಾರೆಟ್ 80-90 ರು. ಹಸಿ ಮೆಣಸಿನಕಾಯಿ 100 ರು. ಹೀಗೆ ಮಾರಾಟ ವಾಗಿದ್ದರೆ ಇನ್ನು ಗುಂಡು ಬದನೇಕಾಯಿ 50-60 ರು. ಬಿಟ್ರೋಟ್ 50-60 ರೂ. ನವಿಲು ಕೋಸ್ 80-90 ರು. ಮೂಲಂಗಿ 60-70 ರು. ಸೌತೆಕಾಯಿ 40-45 ಮಾರಾಟವಾಗುತ್ತಿದೆ.

18-06-2024
Vishwa Vani Pg. 03

ಮೊಳಕಾಲ್ಮುರು: ಶತಕ ಬಾರಿಸಿದ ಟೊಮೆಟೊ ದರ

ಪ್ರಜಾವಾಣಿ ವಾರ್ತೆ

ಮೊಳಕಾಲ್ಮುರು: ಟೊಮೆಟೊ ದರ ಮತ್ತೆ ದಾಖಲೆ ದರಕ್ಕೆ ಏರಿಕೆಯಾಗುತ್ತಿದ್ದು, ಸೋಮವಾರ ತಾಲ್ಲೂಕಿನ ವಾರದ ಸಂತೆಗಳಲ್ಲಿ ₹ 100ಕ್ಕೆ ಮಾರಾಟವಾಗಿದೆ.

ತಾಲ್ಲೂಕಿನ ರಾಂಪುರ, ಕೊಂಡ್ಲಹಳ್ಳಿಯಲ್ಲಿ ಸೋಮವಾರ ನಡೆದ ಸಂತೆಯಲ್ಲಿ ಉತ್ತಮ ಗಾತ್ರದ ಟೊಮೆಟೊ ಒಂದು ಕೆ.ಜಿಗೆ ₹ 100ಕ್ಕೆ ಮಾರಾಟ ಆಗಿದೆ. ಚಿಕ್ಕ ಗಾತ್ರದ ಹಣ್ಣುಗಳು ಪ್ರತಿ ಕೆ.ಜಿ.ಗೆ ₹ 50ರಿಂದ ₹ 60ಕ್ಕೆ ಮಾರಾಟವಾದವು.

ಮೊಳಕಾಲ್ಮುರು, ಚಳ್ಳಕೆರೆ, ಚಿತ್ರದುರ್ಗ ಮತ್ತು ನೆರೆಯ ಆಂಧ್ರ ಪ್ರದೇಶದ ರಾಯದುರ್ಗ ಭಾಗದಿಂದ ಇಲ್ಲಿನ ವಾರದ ಸಂತೆಗಳಿಗೆ ಟೊಮೆಟೊ ಪೂರೈಕೆಯಾಗುತ್ತದೆ. ಈಗ ಆಂಧ್ರ-ಪ್ರದೇಶದ ಮದನಪಲ್ಲಿ ಮಾರುಕಟ್ಟೆ ಹಾಗೂ ಕೋಲಾರ ಮಾರುಕಟ್ಟೆಯಿಂದ ಪೂರೈಕೆಯಾಗುತ್ತಿದೆ. ಪ್ರತಿ 30 ಕೆ.ಜಿ ಹಣ್ಣಿನ ಬಾಕ್ಸ್‌ಗೆ ₹ 1,000ರಿಂದ ₹ 1,500ರವರೆಗೂ ಮಾರಾಟವಾಗಿದೆ ಎಂದು ತರಕಾರಿ ವ್ಯಾಪಾರಿ ಮಲ್ಲಿಕಾರ್ಜುನ್ ಹೇಳಿದರು.



‘ಬೇಡಿಕೆಗೆ ತಕ್ಕಂತೆ ಪೂರೈಕೆ ಇಲ್ಲದಿದ್ದರಿಂದ ದರ ಕಡಿಮೆಯಾಗುವ ಸಾಧ್ಯತೆ ಇಲ್ಲ’ ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ ಹೇಳಿದರು.

ಕೆಲವೆಡೆ ಟೊಮೆಟೊ ಬೆಳೆಗೆ ರೋಗ ಬಾಧೆ ಆವರಿಸಿದೆ. ಈಗ ನಾಟಿ ಮಾಡಿರುವ ಬೆಳೆ ಇಳುವರಿ ಆರಂಭವಾಗಲು ಇನ್ನೂ ಒಂದು ತಿಂಗಳು ಬೇಕಿದೆ. ಕಳೆದ ವರ್ಷ ಇದೇ ಸಮಯಕ್ಕೆ ದಾಖಲೆ ದರ ಸಿಕ್ಕಿತ್ತು ಎಂದು ಬೆಳೆಗಾರ ಮಂಜುನಾಥ್ ಹೇಳಿದರು.

18-06-2024
Praja Vani Pg. 06

ಅಕಾಲಿಕ ಮಳೆ, ಹವಾಮಾನ ವೈಪರೀತ್ಯದಿಂದ ವೈನ್ ದ್ರಾಕ್ಷಿಗೆ ಹೊಡೆತ

ತಗ್ಗಿದ ಇಳುವರಿ, ಆದಾಯವೂ ಕುಸಿತ

• ಕಲಾವತಿ ಬೈಚಬಾಳ

ಹುಬ್ಬಳ್ಳಿ: ದ್ರಾಕ್ಷಾರಸ ಉತ್ಪಾದನೆಗೆ ಬೇಕಾಗುವ ವೈನ್ ದ್ರಾಕ್ಷಿ ರಾಜ್ಯದ ಬಹುತೇಕ ಕಡೆ ಬೆಳೆಯಲಾಗುತ್ತದೆ. ಆದರೆ, ಕಳೆದ ವರ್ಷ ಅಕಾಲಿಕ ಮಳೆ, ಹವಾಮಾನ ವೈಪರೀತ್ಯದಿಂದ ವೈನ್ ದ್ರಾಕ್ಷಿ ಇಳುವರಿ ನಿರೀಕ್ಷಿತ ಮಟ್ಟದಲ್ಲಿ ಬರಲಿಲ್ಲ.

ಸಾಮಾನ್ಯವಾಗಿ ಜನವರಿಯಿಂದ ಮೇ ಅವಧಿಯಲ್ಲಿ ದ್ರಾಕ್ಷಿ ಬೆಳೆ ಕೈ ಸೇರುತ್ತದೆ. ಈ ವರ್ಷ ಬೆಳೆದ ದ್ರಾಕ್ಷಿ ಮುಂದಿನ ವರ್ಷ ವೈನ್‌ಗೆ ಬಳಕೆ ಆಗುತ್ತದೆ. ಹೀಗಾಗಿ 2022-23ನೇ ಸಾಲಿಗೆ ಹೋಲಿಸಿದರೆ 2023-24ರಲ್ಲಿ ಉತ್ಪಾದನೆ ಕುಸಿದಿದೆ. 2022-23ರಲ್ಲಿ 15 ಸಾವಿರ ಟನ್ ವೈನ್ ದ್ರಾಕ್ಷಿ ಉತ್ಪಾದನೆಯಾಗಿ, 121 ಲಕ್ಷ ಲೀಟರ್ ವೈನ್ ಮಾರಾಟವಾಗಿ ₹401 ಕೋಟಿ ಆದಾಯ ಬಂದಿತ್ತು. ಆದರೆ, 2023-24ರಲ್ಲಿ 14 ಸಾವಿರ ಟನ್ ವೈನ್ ದ್ರಾಕ್ಷಿ ಉತ್ಪಾದನೆಯಾಗಿ, 114 ಲಕ್ಷ ಲೀಟರ್ ವೈನ್ ಮಾರಾಟವಾಗಿ ₹388 ಕೋಟಿ ಮಾತ್ರ ಆದಾಯ ಬಂದಿದೆ.

‘ವಿಜಯಪುರ, ಬಾಗಲಕೋಟೆ, ಬೆಳಗಾವಿ, ಬೀದರ್, ಕಲಬುರಗಿ, ಮೈಸೂರು, ಚಾಮರಾಜನಗರ, ಬೆಂಗಳೂರು (ನಗರ/ಗ್ರಾಮಾಂತರ), ಚಿಕ್ಕಬಳ್ಳಾಪುರ, ಬಳ್ಳಾರಿ ಸೇರಿ ಒಟ್ಟು 16 ಜಿಲ್ಲೆಗಳಲ್ಲಿ ಅಂದಾಜು 2,000 ಎಕರೆ ಪ್ರದೇಶದಲ್ಲಿ ವೈನ್ ದ್ರಾಕ್ಷಿ ಬೆಳೆಯಲಾಗುತ್ತದೆ. ಇದರಲ್ಲಿ ಶೇ 70ರಷ್ಟು ದ್ರಾಕ್ಷಿಯನ್ನು ಒಣದ್ರಾಕ್ಷಿಗಾಗಿ ಬಳಸಿದರೆ, ಶೇ10 ರಷ್ಟನ್ನು ವೈನ್ ಮಾಡಲು ಉಪಯೋಗಿಸಲಾಗುತ್ತದೆ. ಶೇ 20ರಷ್ಟು ದ್ರಾಕ್ಷಿಯನ್ನು ಮಾರಲಾಗುತ್ತದೆ’ ಎಂದು ರಾಜ್ಯ ದ್ರಾಕ್ಷಿ ಮತ್ತು ದ್ರಾಕ್ಷಾರಸ ಮಂಡಳಿಯ ವ್ಯವಸ್ಥಾಪಕ ನಿರ್ದೇಶಕ ಟಿ.ಸೋಮು ‘ಪ್ರಜಾವಾಣಿ’ಗೆ ತಿಳಿಸಿದರು.

‘2023-24ರಲ್ಲಿ 1 ಕೆ.ಜಿ ದ್ರಾಕ್ಷಿಗೆ ಹಾಪ್‌ಕಾಮ್ಸ್ ದರ ₹46 ಇತ್ತು (ತಳಿಗಳ ಆಧಾರದ ಮೇಲೆ ದರ ನಿಗದಿ). 1 ಕೆ.ಜಿ ವೈನ್ ದ್ರಾಕ್ಷಿಗೆ ₹55 ರಿಂದ ₹60 ದರ ಇತ್ತು. 2019-20ರಿಂದ ಈವರೆಗೆ ರಾಜ್ಯದಲ್ಲಿ 460 ಲಕ್ಷ ಲೀಟರ್ ವೈನ್ ತಯಾರಿಸಲಾಗಿದೆ. 2019-20ರಿಂದ 2023-24ರವರೆಗೆ ವೈನ್ ಮಾರಾಟದಿಂದ ₹1,602 ಕೋಟಿ ಆದಾಯ ಬಂದಿದೆ’ ಎಂದರು.

ಪ್ರತಿ ಲೀಟರ್‌ಗೆ ₹300 ತೆರಿಗೆ: ‘ಕಳೆದ ಬಾರಿ ಮಹಾರಾಷ್ಟ್ರದ ನಾಸಿಕ್‌ದಿಂದಲೂ ವೈನ್ ದ್ರಾಕ್ಷಿ ತರಿಸಿಕೊಳ್ಳಲಾಗಿತ್ತು. ಇದಕ್ಕೆ ಜಿಎಸ್‌ಟಿ ಮಾತ್ರ ತಗಲುತ್ತದೆ. ಆದರೆ, ಇಲ್ಲಿಂದ ಹೊರರಾಜ್ಯಗಳಿಗೆ ವೈನ್ ಮಾರಲು ಹಾಗೂ ತರಿಸಿಕೊಳ್ಳಲು ಪ್ರತಿ ಲೀಟರ್‌ಗೆ ₹300 ತೆರಿಗೆ ಕಟ್ಟಬೇಕು. ಹೊರ ರಾಜ್ಯದವರು ಇಲ್ಲಿಯೇ ಖಾಸಗಿ ವೈನರಿಗಳನ್ನು ತೆರೆದಿರುವುರಿಂದ ಮಾರಾಟದಲ್ಲಿ ಇಳಿಕೆ ಆಗಿದೆ’ ಎಂದರು.

‘ಈ ವರ್ಷದ ರಾಜ್ಯ ಬಜೆಟ್‌ನಲ್ಲಿ ಮದ್ಯದ ದರ ಏರಿಕೆ ಮಾಡಲಾಗಿತ್ತು. ಆದರೆ ನಾಲ್ಕು ವರ್ಷಗಳಿಂದ ವೈನ್ ದರದಲ್ಲಿ ಏರಿಕೆ ಇಲ್ಲ. ಸೇವನೆ ಮಾಡುವವರ ಸಂಖ್ಯೆಯಲ್ಲಿ ಇಳಿಮುಖವಾಗಿದ್ದು, ಆದಾಯವೂ ಸ್ವಲ್ಪ ಕಡಿಮೆ ಆಗಿದೆ’ ಎಂದರು.

ಕೆಂಪು ದ್ರಾಕ್ಷಾರಸ ತಯಾರಿಸಲು ಬಳಸುವ ದ್ರಾಕ್ಷಿ

‘ಶೀತಲ ಘಟಕ ನಿರ್ಮಾಣ ಶೀಘ್ರ ಆರಂಭ’

ರಾಜ್ಯದ 32,473 ಹೆಕ್ಟೇರ್ ಪ್ರದೇಶದಲ್ಲಿ ವರ್ಷಕ್ಕೆ 8.21 ಲಕ್ಷ ಮೆಟ್ರಿಕ್ ಟನ್ ದ್ರಾಕ್ಷಿ ಬೆಳೆದರೆ, ವಿಜಯಪುರ, ಬೆಳಗಾವಿ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ 25,637 ಹೆಕ್ಟೇರ್ ಪ್ರದೇಶದಲ್ಲಿ 6.64 ಲಕ್ಷ ಮೆಟ್ರಿಕ್ ಟನ್ ದ್ರಾಕ್ಷಿ ಬೆಳೆಯಲಾಗುತ್ತದೆ.

‘ವಿಜಯಪುರದಲ್ಲಿ ವೈನ್ ಪಾರ್ಕ್‌ಗಂದೇ ಮೀಸಲಿಟ್ಟಿರುವ 141 ಎಕರೆ ಪ್ರದೇಶದಲ್ಲಿ 10 ಸಾವಿರ ಟನ್ ಸಾಮರ್ಥ್ಯದ ಶೀತಲ ಘಟಕ ನಿರ್ಮಿಸಲು ನಬಾರ್ಡ್‌ನಿಂದ ಈಗಾಗಲೇ ₹39.7 ಕೋಟಿ ನೆರವು ಸಿಕ್ಕಿದೆ. ಟೆಂಡರ್ ಸಹ ಕರೆಯಲಾಗಿದ್ದು, ಜೂನ್ ಅಂತ್ಯದ ಒಳಗೆ ಪ್ರಕ್ರಿಯೆ ಪೂರ್ಣ ಆಗಲಿದೆ. ಶೀಘ್ರವೇ ಘಟಕ ನಿರ್ಮಾಣ ಆರಂಭವಾಗಲಿದೆ’ ಎಂದು ಟಿ.ಸೋಮು ತಿಳಿಸಿದರು.



(ಮಾಹಿತಿ: ರಾಜ್ಯ ದ್ರಾಕ್ಷಿ ಮತ್ತು ದ್ರಾಕ್ಷಾರಸ ಮಂಡಳಿ)

> ರಾಜ್ಯದಲ್ಲಿ 19 ಖಾಸಗಿ ವೈನರಿಗಳಿವೆ. 1,000ಕ್ಕೂ ಹೆಚ್ಚು ರೈತರು, ಕಾರ್ಮಿಕರು ವೈನರಿಗಳ ಜತೆಗೆ ಒಡಂಬಡಿಕೆ ಮಾಡಿಕೊಂಡಿದ್ದು ಅವರು ಮಾತ್ರ ವೈನ್ ದ್ರಾಕ್ಷಿ ಬೆಳೆಯುತ್ತಾರೆ
>
> **ಟಿ.ಸೋಮು**, ವ್ಯವಸ್ಥಾಪಕ ನಿರ್ದೇಶಕ, ರಾಜ್ಯ ದ್ರಾಕ್ಷಿ ಮತ್ತು ದ್ರಾಕ್ಷಾರಸ ಮಂಡಳಿ

18-06-2024
Praja Vani Pg. 10

ಮಳೆ: ಕೃಷಿ ಚಟುವಟಿಕೆ ಚುರುಕು

ಬೆಂಗಳೂರು: ಬೆಂ.ಗ್ರಾಮಾಂತರ ಜಿಲ್ಲೆಯಲ್ಲಿ ಈ ಬಾರಿ ವಾಡಿಕೆಗಿಂತ ಹೆಚ್ಚು ಮಳೆಯಾಗುತ್ತಿರುವುದು ರೈತರ ಸಂತಸವನ್ನು ಇಮ್ಮಡಿಗೊಳಿಸಿದೆ. ಈಗಾಗಲೇ ಬಿತ್ತನೆಗಾಗಿ ರೈತರು ಉಳುಮೆ ಕಾರ್ಯದಲ್ಲಿ ನಿರತರಾಗಿದ್ದು ಬಿತ್ತನೆ ಬೀಜ ಮತ್ತು ರಸಗೊಬ್ಬರ ವಿತರಣೆಗಾಗಿ ಕೃಷಿ ಇಲಾಖೆ ಸಿದ್ಧತೆ ಮಾಡಿಕೊಂಡಿದೆ. ರೈತ ಸಂಪರ್ಕ ಕೇಂದ್ರದ ಮೂಲಕ ಬಿತ್ತನೆ ಬೀಜ ವಿತರಣೆ ಮಾಡಲಾಗುತ್ತಿದೆ.

ಬೆಂ.ಗ್ರಾಮಾಂತರ ಜಿಲ್ಲೆಯಲ್ಲಿ ಈ ಹಿಂದೆ ಜೂ.1 ರಿಂದ 12ರವರೆಗೆ 39 ಮಿ.ಮೀ ವಾಡಿಕೆ ಮಳೆಯಾಗುತ್ತಿತ್ತು. ಈ ಬಾರಿ 87 ಮಿ.ಮೀ ಮಳೆಯಾಗಿದ್ದು, ಕಳೆದ ಬಾರಿಗಿಂತ ಹೆಚ್ಚಾಗಿದೆ. ಜಿಲ್ಲೆಯ ದೇವನಹಳ್ಳಿಯಲ್ಲಿ 44.4 ಮಿ.ಮೀ ವಾಡಿಕೆ ಮಳೆ ಇದ್ದು, ಈ ಬಾರಿ 103.6 ಮಿ.ಮೀ ಮಳೆಯಾಗಿದೆ, ದೊಡ್ಡಬಳ್ಳಾಪುರದಲ್ಲಿ 40.0 ಮಿ.ಮೀ ವಾಡಿಕೆ ಮಳೆ ಇದ್ದರೆ, ಈ ಬಾರಿ 91.3 ಮಿ.ಮೀ ಮಳೆಯಾಗಿದೆ, ಹೊಸಕೋಟೆಯಲ್ಲಿ 37.8 ಮಿ.ಮೀ ವಾಡಿಕೆ ಮಳೆ ಇದ್ದು ಈ ಬಾರಿ 67.5 ಮಿ.ಮೀ ಮಳೆಯಾಗಿದೆ, ನೆಲಮಂಗಲದಲ್ಲಿ 43.7 ಮಿ.ಮೀ ವಾಡಿಕೆ ಮಳೆ ಇದ್ದು ಈ ಬಾರಿ 85.4 ಮಿ.ಮೀ ಮಳೆಯಾಗಿದೆ.

ಜಿಲ್ಲೆಯ ದೇವನಹಳ್ಳಿ, ದೊಡ್ಡಬಳ್ಳಾಪುರ, ಹೊಸಕೋಟೆ ಮತ್ತು ನೆಲಮಂಗಲ ತಾಲೂಕಿನಲ್ಲಿ ಪ್ರಮುಖವಾಗಿ ರಾಗಿ, ಅಲಸಂದಿ, ತೊಗರಿ, ಕಡ್ಲೇಕಾಯಿ ಮತ್ತು ಮುಸುಕಿನಜೋಳ ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಲಾಗುತ್ತದೆ. ರಾಗಿ ಮತ್ತು ಮುಸುಕಿನ ಜೋಳಕ್ಕೆ ಬೆಂಬಲ ಬೆಲೆಯಲ್ಲಿ ಸರ್ಕಾರ ಖರೀದಿ ಮಾಡುತ್ತಿರುವುದರಿಂದ ರೈತರು ರಾಗಿ ಮತ್ತು ಮುಸುಕಿನ ಜೋಳವನ್ನು ಹೆಚ್ಚಿನ ಪ್ರಮಾಣದಲ್ಲಿ ಬೆಳೆಯಲು ಸಿದ್ಧತೆ ಮಾಡಿಕೊಂಡಿದ್ದಾರೆ.

ಕೃಷಿ ಇಲಾಖೆಯಿಂದ ಸಕಲ ಸಿದ್ಧತೆ

ಕೃಷಿ ಚಟುವಟಿಕೆಗಳು ಪ್ರಾರಂಭವಾಗಿರುವುದರಿಂದ ಕೃಷಿ ಇಲಾಖೆ ಸಹ ಬಿತ್ತನೆ ಬೀಜ ಮತ್ತು ರಸಗೊಬ್ಬರ ಪೂರೈಕೆಗೆ ಸಿದ್ಧತೆಯನ್ನು ಮಾಡಿಕೊಂಡಿದೆ. ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜಗಳ ದಸ್ತಾನು ಮಾಡಲಾಗಿದೆ. ಯೂರಿಯಾ ಮತ್ತು ಡಿಎಪಿಯ ರಸಗೊಬ್ಬರಗಳ ದಸ್ತಾನುಗಳನ್ನು ಅಂಗಡಿಗಳಲ್ಲಿ ಮಾಡಲಾಗಿದೆ. ರೈತರಿಗೆ ಕೊರತೆಯಾಗದ ರೀತಿಯಲ್ಲಿ ಬೇಡಿಕೆಗೆ ತಕ್ಕಂತೆ ದಾಸ್ತಾನು ಇರುವಂತೆ ವ್ಯವಸ್ಥೆ ಮಾಡಲಾಗಿದೆ.

18-06-2024
Samyuktha Kar. Pg. 03

ಹೊಸ ದಿಗಂತ
ಸೋಮವಾರ, 17 ಜೂನ್ 2024,

ಕೃಷಿ ಪುಸ್ತಕ ಪ್ರಶಸ್ತಿ ಅರ್ಜಿ ಆಹ್ವಾನ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ಕನ್ನಡದಲ್ಲಿ ಕೃಷಿ ಬರವಣಿಗೆಯನ್ನು ಪ್ರೋತ್ಸಾಹಿಸಲು ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ ನೀಡುತ್ತಿದ್ದು , 2023ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಕನ್ನಡ ಪುಸ್ತಕಗಳನ್ನು ಲೇಖಕರಿಂದ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಿದೆ. ಪ್ರಶಸ್ತಿಯು ಹತ್ತು ಸಾವಿರ ನಗದು ಮತ್ತು ಪ್ರಶಸ್ತಿ ಫಲಕವನ್ನು ಒಳಗೊಂಡಿರುತ್ತದೆ. ಲೇಖಕರು ನಿಗದಿತ ನಮೂನೆಯಲ್ಲಿ ಪ್ರಶಸ್ತಿಗೆ ಸಲ್ಲಿಸುವ ಮೂರು ಪ್ರತಿಗಳನ್ನು ತಮ್ಮ ಸ್ವ ವಿವರಗಳೊಂದಿಗೆ ಜು.15 ರೊಳಗೆ ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು -560065 ಇವರಿಗೆ ಕಳುಹಿಸಬಹುದಾಗಿದ್ದು, ಹೆಚ್ಚಿನ ವಿವರಗಳಿಗೆ http://uasbangalore.edu.in ಭೇಟಿ ನೀಡುಬಹದು ಅಥವಾ ದೂರವಾಣಿ ಸಂಖ್ಯೆ: 080-23330153ಗೆ ಸಂಪರ್ಕಿಸಬಹದು ಎಂದು ಪ್ರಕಟಣೆ ತಿಳಿಸಲಾಗಿದೆ.

ಕನ್ನಡಪ್ರಭ
ಭಾನುವಾರ 16.06.2024

ಕನ್ನಡ ಕೃಷಿ ಪುಸ್ತಕ ಪ್ರಶಸ್ತಿಗೆ ವಿವಿಯಿಂದ ಅರ್ಜಿ ಆಹ್ವಾನ

ಬೆಂಗಳೂರು: ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯ, ಕನ್ನಡದಲ್ಲಿ ಕೃಷಿ ಬರವಣಿಗೆಯನ್ನು ಪ್ರೋತ್ಸಾಹಿಸಲು 'ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ' ನೀಡಲಿದ್ದು, ಪ್ರಸಕ್ತ ಸಾಲಿಗೆ ಅರ್ಜಿ ಆಹ್ವಾನಿಸಿದೆ. 2023 ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಕನ್ನಡ ಪುಸ್ತಕಗಳನ್ನು ಲೇಖಕರು ಕಳುಹಿಸಬಹುದು. ಪ್ರಶಸ್ತಿಯು 10 ಸಾವಿರ ರು. ನಗದು, ಪ್ರಶಸ್ತಿ ಫಲಕ ಒಳಗೊಂಡಿದೆ. ಸ್ವವಿವರದೊಂದಿಗೆ ಮೂರು ಪ್ರತಿಗಳನ್ನು ಜು.15 ರೊಳಗೆ ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು -560065 ಇವರಿಗೆ ಕಳುಹಿಸಬೇಕು. ಹೆಚ್ಚಿನ ವಿವರಗಳಿಗೆ http://uasbangalore.edu.in ಅಂತರ್ಜಾಲಕ್ಕೆ ಭೇಟಿ ನೀಡುವುದು ಅಥವಾ kannada.uas@gmail.com ಮಿಂಚಂಚೆ, ದೂ: 080-23330153 ಸಂಪರ್ಕಿಸಬಹುದು ಎಂದು ವಿವಿ ಪ್ರಕಟಣೆ ತಿಳಿಸಿದೆ.

ಉದಯವಾಣಿ
ಭಾನುವಾರ, ಜೂನ್ 16, 2024

'ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ'ಗೆ ಪುಸ್ತಕ ಆಹ್ವಾನ

ಬೆಂಗಳೂರು: ನಗರದ ಕೃಷಿ ವಿಶ್ವವಿದ್ಯಾಲಯವು ಕನ್ನಡದಲ್ಲಿ ಕೃಷಿ ಬರವಣಿಗೆಯನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕೊಡಮಾಡುವ 'ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ'ಗೆ 2023ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಕನ್ನಡ ಪುಸ್ತಕಗಳನ್ನು ಲೇಖಕರಿಂದ ಆಹ್ವಾನಿಸಲಾಗಿದೆ. ಈ ಪ್ರಶಸ್ತಿಯು 10 ಸಾವಿರ ರೂ. ನಗದು ಮತ್ತು ಪ್ರಶಸ್ತಿ ಫಲಕವನ್ನು ಒಳಗೊಂಡಿರುತ್ತದೆ. ಅರ್ಜಿ ಸಲ್ಲಿಸುವ ಲೇಖಕರು, ನಿಗದಿತ ನಮೂನೆಯಲ್ಲಿ ಪ್ರಶಸ್ತಿಗೆ ಸಲ್ಲಿಸುವ ಕೃತಿಯ 3 ಪ್ರತಿಗಳನ್ನು ತಮ್ಮ ಸ್ವ-ವಿವರಗಳೊಂದಿಗೆ ಜುಲೈ 15ರೊಳಗಾಗಿ ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವವಿದ್ಯಾಲಯ, ಗಾ.ಕೃ.ವಿ.ಕೇ., ಬೆಂಗಳೂರು-65 ವಿಳಾಸಕ್ಕೆ ಕಳುಹಿಸಬಹುದಾಗಿದೆ ಎಂದು ಕೃಷಿ ವಿವಿ ಪ್ರಕಟಣೆಯಲ್ಲಿ ತಿಳಿಸಿದೆ. ಹೆಚ್ಚಿನ ವಿವರಗಳಿಗೆ http://uasbangalore.edu.in ಭೇಟಿ ನೀಡಬಹುದು ಅಥವಾ kannada.uas@gmail.com ಅಥವಾ 080-23330153 ಸಂಪರ್ಕಿಸಬಹುದು.

ವಿಶ್ವವಾಣಿ
16.06.2024 ಭಾನುವಾರ

ಅರ್ಜಿ ಆಹ್ವಾನ

ಬೆಂಗಳೂರು: ಬೆಂಗಳೂರು ಕೃಷಿ ವಿವಿಯು ಕನ್ನಡದಲ್ಲಿ ಕೃಷಿ ಬರವಣಿಗೆಯನ್ನು ಪ್ರೋತ್ಸಾಹಿಸಲು ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ' ನೀಡುತ್ತಿದ್ದು 2023ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಕನ್ನಡ ಪುಸ್ತಕಗಳನ್ನು ಲೇಖಕರಿಂದ ಆಹ್ವಾನಿಸಿದೆ. ಪ್ರಶಸ್ತಿಯು 10,000ರು. ನಗದು ಮತ್ತು ಪ್ರಶಸ್ತಿ ಫಲಕವನ್ನು ಒಳಗೊಂಡಿರುತ್ತದೆ. ಲೇಖಕರು ನಿಗದಿತ ನಮೂನೆಯಲ್ಲಿ ಪ್ರಶಸ್ತಿಗೆ ಸಲ್ಲಿಸುವ ಮೂರು ಪ್ರತಿಗಳನ್ನು ತಮ್ಮ ಸ್ವ ವಿವರಗಳೊಂದಿಗೆ ಜುಲೈ 15 ರೊಳಗೆ ಕಳುಹಿಸಬೇಕು. ಹೆಚ್ಚಿನ ವಿವರಗಳಿಗೆ http://uasbangalore.edu.in ಅಂತರ್ಜಾಲಕ್ಕೆ ಭೇಟಿ ನೀಡುವುದು ಅಥವಾ 080-23330153ಗೆ ಸಂಪರ್ಕಿಸುವುದು ಎಂದು ಪ್ರಕಟಣೆ ತಿಳಿಸಿದೆ.

ವಿಜಯವಾಣಿ
ಸೋಮವಾರ 17 ಜೂನ್ 2024

ಪ್ರಶಸ್ತಿಗೆ ಅರ್ಜಿ ಆಹ್ವಾನ

ಬೆಂಗಳೂರು: ಕನ್ನಡದಲ್ಲಿ ಕೃಷಿ ಬರವಣಿಗೆಯನ್ನು ಪ್ರೋತ್ಸಾಹಿಸಲು ಬೆಂಗಳೂರು ಕೃಷಿ ವಿಶ್ವವಿದ್ಯಾಲಯವು ಕನ್ನಡ ಕೃಷಿ ಪುಸ್ತಕ ಪ್ರಶಸ್ತಿ ನೀಡುತ್ತಿದ್ದು 2023ರಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟವಾಗಿರುವ ಕೃಷಿ ಸಂಬಂಧಿತ ಪುಸ್ತಕಗಳನ್ನು ಲೇಖಕರಿಂದ ಆಹ್ವಾನಿಸಿದೆ. ಪ್ರಶಸ್ತಿಯು 10,000 ರೂ. ನಗದು ಮತ್ತು ಫಲಕ ಒಳಗೊಂಡಿರುತ್ತದೆ. ಲೇಖಕರು ನಿಗದಿತ ನಮೂನೆಯಲ್ಲಿ ಪ್ರಶಸ್ತಿಗೆ ಸಲ್ಲಿಸುವ ಮೂರು ಪ್ರತಿಗಳನ್ನು ಸ್ವ-ವಿವರಗಳೊಂದಿಗೆ ಜು.15ರೊಳಗೆ ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿವಿ, ಬೆಂಗಳೂರು- 560065 ಇವರಿಗೆ ಕಳುಹಿಸುವುದು. ವಿವರಗಳಿಗೆ http://uasbangalore.edu.in ಅಂತರ್ಜಾಲಕ್ಕೆ ಭೇಟಿ ನೀಡಿ. ಮಾಹಿತಿಗೆ ದೂ: 080-23330153 ಕರೆ ಮಾಡಬಹುದು ಎಂದು ಪ್ರಕಟಣೆ ತಿಳಿಸಿದೆ.

ಪ್ರಜಾವಾಣಿ
ಸೋಮವಾರ • ಜೂನ್ 17, 2024

ಕನ್ನಡ ಕೃಷಿ ಪುಸ್ತಕ ಪ್ರಶಸ್ತಿಗೆ ಆಹ್ವಾನ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕೃಷಿ ವಿಶ್ವವಿದ್ಯಾಲಯವು (ಜಿಕೆವಿಕೆ) 2024ನೇ ಸಾಲಿಗೆ 'ಕನ್ನಡ ಕೃಷಿ ಪುಸ್ತಕ' ಪ್ರಶಸ್ತಿಗಾಗಿ ಕೃತಿಗಳನ್ನು ಆಹ್ವಾನಿಸಿದೆ.

2023ರ ಜನವರಿಯಿಂದ ಡಿಸೆಂಬರ್ ಒಳಗೆ ಪ್ರಕಟವಾಗಿರುವ ಕೃಷಿ ಸಂಬಂಧಿತ ಪುಸ್ತಕಗಳನ್ನು ಪ್ರಶಸ್ತಿ ಆಯ್ಕೆಗೆ ಕಳುಹಿಸಬಹುದು.

ಪ್ರಶಸ್ತಿಯು ₹10 ಸಾವಿರ ನಗದು ಮತ್ತು ಪ್ರಶಸ್ತಿ ಪತ್ರವನ್ನು ಒಳಗೊಂಡಿರುತ್ತದೆ. ಲೇಖಕರಿಗೆ ಮಾತ್ರ ಪ್ರಶಸ್ತಿ ನೀಡಲಾಗುತ್ತದೆ. ಪುಸ್ತಕದ ಮೂರು ಪ್ರತಿಗಳನ್ನು ಸ್ವವಿವರಗಳೊಂದಿಗೆ ಜುಲೈ 15ರ ಒಳಗೆ ಮುಖ್ಯಸ್ಥರು, ಕನ್ನಡ ಅಧ್ಯಯನ ವಿಭಾಗ, ಕೃಷಿ ವಿಶ್ವ ವಿದ್ಯಾಲಯ, ಜಿಕೆವಿಕೆ, ಬೆಂಗಳೂರು-560065 ಇಲ್ಲಿಗೆ ಕಳುಹಿಸಬೇಕು.

ವಿವರಗಳಿಗೆ http://uasbangalore.edu.in ವೆಬ್‌ತಾಣಕ್ಕೆ ಭೇಟಿ ನೀಡಬಹುದು. kannada.uas@gmail.com ಇ-ಮೇಲ್ ಅಥವಾ ದೂರವಾಣಿ ಸಂಖ್ಯೆ 080 23330153/373 ಸಂಪರ್ಕಿಸಬಹುದು ಎಂದು ಕನ್ನಡ ಅಧ್ಯಯನ ವಿಭಾಗದ ಮುಖ್ಯಸ್ಥ ಜಿ. ವೀರಭದ್ರಗೌಡ ತಿಳಿಸಿದ್ದಾರೆ.